S.G.V.C Vidya Prasarak Trust's

# M.G.V.C Arts, Commerce and Science College, Muddebihal

## Department of Kannada

## ICT Based Class

## B.Sc III Semester

## Topic: Tatvapada (Santa Shishunal Sharif)

Name of the Faculty: Dr. P.N. Naragund, HOD, Dept of Kannada



**Academic Year- 2023-24**

**Date: 12-01-2024** | **Time: 10.45am**

ಮುಖ್ಯಸ್ಥರು,
ಕನ್ನಡ ವಿಭಾಗ
ಎಂ. ಜಿ. ವ್ಹಿ. ಸಿ. ಕಾಲೇಜು,
ಮುದ್ದೇಬಿಹಾಳ-586212.

PRINCIPAL,
M.G.V.C. Arts, Commerce & Science Colle[illegible]
[illegible]

S.G.V.C Vidya Prasarak Trust's

# M.G.V.C Arts, Commerce and Science College, Muddebihal

## Department of Kannada

## ICT Based Class

## Topic: Tatvapada (Santa Shishunal Sharif)

Academic Year- 2024-25

**B.Sc III Semester**

Name of the Faculty: Dr. P.N. Naragund, HOD, Dept of Kannada

**Date: 12-01-2024** **Time: 10.45am**













ಮುಖ್ಯಸ್ಥರು,
ಕನ್ನಡ ವಿಭಾಗ
ಎಂ. ಜಿ. ವ್ಹಿ. ಸಿ. ಕಾಲೇಜು,
ಮುದ್ದೇಬಿಹಾಳ-586212.

# ಬಿದ್ದಿಯಬ್ಬೇ ಮುದುಕಿ

ಬಿದ್ದಿಯಬ್ಬೇ ಮುದುಕಿ
ಬಿದ್ದೀಯಬ್ಬೇ.

ನೀ ದಿನ ಹೋದಾಕಿ
ಇರು ಭಾಳ ಜೋಕಿ
ಬಿದ್ದೀಯಬೇ ಮುದುಕಿ ಬಿದ್ದೀಯಬೇ.

ಸದ್ಯಕಿದು ಹುಲುಗೂರ ಸಂತಿ
ಗದ್ದಲದೊಳಗ್ಯಾಕ ನಿಂತಿ?
ಬಿದ್ದು ಇಲ್ಲಿ ಒದ್ದಾಡಿದರ
ಎದ್ದು ಹ್ಯಾಂಗ ಹಿಂದಕ ಬರತಿ?

ಬುದ್ದಿಗೇಡಿ ಮುದುಕಿ ನೀನು ಬಿದ್ದೀಯಬೇ.
ಬುಟ್ಟಿಯಲ್ಲಿ ಪತ್ತಲ ಇಟ್ಟಿ
ಅದನು ಉಟ್ಟು ಹೊತ್ತೊಳು ಜೋಕಿ;
ಕೆಟ್ಟಗಂಟಿ ಚೌಡೇರು ಬಂದು

ಉಟ್ಟುದನ್ನ ಕದ್ಯಾರ ಜೋಕಿ!
ಬುದ್ದಿಗೇಡಿ ಮುದುಕಿ ನೀನು ಬಿದ್ದೀಯಬೇ.
ಶಿಶುನಾಳಾಧೀಶನ ಮುಂದೆ
ಕೊಸರಿ ಕೊಸರಿ ಹೋಗಬ್ಯಾಡ.

ಹಸನವಿಲ್ಲ ಹರಯ ಸಂದ
ಪಿಸುರು ಪಿಚ್ಚುಗಣ್ಣಿನ ಮುದುಕಿ
ಬುದ್ದಿಗೇಡಿ ಮುದುಕಿ ನೀನು ಬಿದ್ದೀಯಬೇ.

ಮುಖ್ಯಸ್ಥರು,
ಕನ್ನಡ ವಿಭಾಗ
ಎಂ. ಜಿ. ವ್ಹಿ. ಸಿ. ಕಾಲೇಜು,
ಮುದ್ದೇಬಿಹಾಳ-586212.

PRINCIPAL,
M.G.V.C. Arts, Commerce & Science College

S.G.V.C Vidya Prasarak Trust's

# M.G.V.C ARTS, COMMERCE AND SCIENCE COLLEGE, MUDDEBIHAL

NAAC A+ GRADE


## DEPARTMENT OF KANNADA

## YEAR - 2023-24

## Teachers Use ICT enabled tools for Effective Teaching Learning Process

**Name of the Staff Member: Prof. V. S.Lamani**

**Class: B.A.I Semester Date: 01.01.2024 Time: 10.30 to 11.30 am**




PRINCIPAL,
M.G.V.C. Arts, Commerce & Science College
MUDDEBIHAL-586212. Dist: Vijayapur.

# Teachers Use ICT enabled tools for Effective Teaching Learning Process

**Name of the Staff Member: Prof. V. S.Lamani**

**Class: B.A.I Semester** **Date: 01.01.2024** **Time: 10.30 to 11.30 am**




# ರನ್ನ

ರನ್ನನು (೯೪೯-೧೦೨೦). ಹತ್ತನೆಯ ಶತಮಾನದ ಕನ್ನಡ ಸಾಹಿತ್ಯದ ಕವಿ ರತ್ನತ್ರಯರಲ್ಲಿ ಒಬ್ಬನಾಗಿದ್ದಾನೆ.ಇವನ ಊರು ಬೆಳುಗುಲಿ(ರನ್ನ ಬೆಳಗಲಿ). ಹಳಗನ್ನಡದ ಮಹತ್ವದ ಕವಿ. ಪಂಪನ ಕಿರಿಯ ಸಮಕಾಲೀನನು . **ಅಜಿತತೀರ್ಥಂಕರ ಪುರಾಣತಿಲಕಂ, ಸಾಹಸಭೀಮವಿಜಯ** (ಗದಾಯುದ್ಧ) ಎಂಬ ಕಾವ್ಯಗಳ ಕರ್ತೃ. ಶಕ್ತಿಕವಿ ಎಂದೇ ಖ್ಯಾತನಾಗಿದ್ದಾನೆ. *ರನ್ನನಿರುವ ಕನ್ನಡಕ್ಕೆ ಅನ್ಯರಿಂದ ಬಹುದೆ ಧಕ್ಕೆ? ಬರಿಯ ಕವಿಯೆ ಸಿಡಿಲ ಚಕ್ಕೆ ಎಂಬ ಹೊಗಳಿಕೆಗೆ ಕುವೆಂಪು ಅವರಿಂದ ಪಾತ್ರನಾಗಿದ್ದಾನೆ.*

ಚಾಲುಕ್ಯರ ಎರಡನೆಯ ತೈಲಪ ಚಕ್ರವರ್ತಿ ಆಹವಮಲ್ಲ ಹಾಗೂ ಅವನ ಮಗ ಸತ್ಯಾಶ್ರಯ ಇರವಬೆಡಂಗ ಇವರ ಆಸ್ಥಾನಕವಿಯಾಗಿದ್ದು ಕವಿಚಕ್ರವರ್ತಿ ಎಂಬ ಬಿರುದನ್ನು ಪಡೆದಿದ್ದನು

ರನ್ನನು ಕ್ರಿ.ಶ.೯೪೯ರಲ್ಲಿ ಬೆಳುಗುಲಿ (ಈಗಿನ ರನ್ನ ಬೆಳಗಲಿ ತಾ|| ಮುಧೋಳ) ಗ್ರಾಮದಲ್ಲಿ ಜನಿಸಿದನು. ತಂದೆ ಜಿನವಲ್ಲಭ , ತಾಯಿ ಅಬ್ಬಲಬ್ಬೆ. ರನ್ನನು ಜೈನ ಮನೆತನದ ಬಳೆಗಾರ ಕುಲದವನು.ಆ ಕಾಲದ ಪ್ರಸಿದ್ಧ ಗುರು ಅಜಿತಸೇನಾಚಾರ್ಯರ ಬಳಿ ರನ್ನನ ವಿದ್ಯಾಭ್ಯಾಸ. ಈತನು ಐದು ಕೃತಿಗಳನ್ನು ರಚಿಸಿದ್ದು ಮೂರು ಕೃತಿಗಳು ಮಾತ್ರ ಲಭ್ಯವಿವೆ.

NAAC A+ GRADE

ರನ್ನನ ಜೀವನ ಚರಿತ್ರೆಗೆ ಸಂಬಂಧಿಸಿದ ಅನೇಕ ವಿಚಾರಗಳು ಇವನ ಎರಡೂ ಕೃತಿಗಳಿಂದ ದೊರೆಯುತ್ತವೆ. ಘಟಪ್ರಭಾ ಮತ್ತು ಕೃಷ್ಣಾ ನದಿಗಳು ಹರಿಯುವಲ್ಲಿ, ತದ್ದವಾಡಿಗೆ ದಕ್ಷಿಣಕ್ಕೂ, ತೊರಗಲೆಗೆ ಉತ್ತರಕ್ಕೂ ಬೆಳುಗಲಿ ದೇಶವಿದೆ. ಈ ಬೆಳುಗುಲಿ 500ರಲ್ಲಿ ಅಗ್ಗಳವೆನಿಸುವ ಜಮಖಂಡಿ ಎಂಬ ಪ್ರಾಂತ್ಯವಿದೆ. ಇದಕ್ಕೆ ತಿಲಕಪ್ರಾಯವಾಗಿ ಪ್ರಸಿದ್ಧಿ ಪಡೆದ ಬೆಳುಗುಲಿ (ಈಗಿನ ರನ್ನ ಬೆಳಗಲಿ) ಎಂಬುದೇ ರನ್ನನ ಜನ್ಮಸ್ಥಳ. ತಾಯಿ ಅಬ್ಬಲಬ್ಬೆ; ತಂದೆ ಜಿನವಲ್ಲಭ; ಅಣ್ಣಂದಿರು ರೇಚಣ ಮತ್ತು ಮಾರಯ್ಯ. ರನ್ನನ ಸಾಂಸಾರಿಕ ಜೀವನ ಕೂಡ ಚೆನ್ನಾಗಿತ್ತು. ಇವನಿಗೆ ಶಾಂತಿ ಮತ್ತು ಜಕ್ಕಿ ಎಂಬ ಇಬ್ಬರು ಹೆಂಡತಿಯರು. ಧರ್ಮದಲ್ಲಿ ನಿಷ್ಠೆಯುಳ್ಳವರೆಂದು ಇವರ ವರ್ಣನೆ. ಇವರಿಗೆ ರಾಯ ಮತ್ತು ಅತ್ತಿಮಬ್ಬೆ ಎಂಬ ಇಬ್ಬರು ಮಕ್ಕಳಿದ್ದರು. ತನ್ನ ಮಕ್ಕಳಿಗೆ ಚಾವುಂಡರಾಯ ಮತ್ತು ಅತಿಮಬ್ಬೆಯರ ಹೆಸರುಗಳನ್ನು ಇಡುವುದರ ಮೂಲಕ ಕವಿ ಅವರ ಉಪಕಾರಕ್ಕೆ ಗೌರವವನ್ನು ತೋರಿದ್ದಾನೆ.

ರನ್ನನಿಗೆ ತಂದೆಯಿಂದ ಬಳುವಳಿಯಾಗಿ ಬಂದದ್ದು ಬಳೆಗಾರವೃತ್ತಿ. ಆದರೆ ರನ್ನ ಪ್ರತಿಕೂಲ ಪರಿಸ್ಥಿತಿಯೊಡನೆ ಹೋರಾಡಿ ಕವಿಯಾದವನು. ಚಿಕ್ಕಂದಿನಿಂದಲೂ ಓದಿನಲ್ಲಿ ಆಸಕ್ತನಾಗಿದ್ದ ಈತ ತನ್ನ ಆಸಕ್ತಿಯನ್ನು ಪೂರೈಸಿಕೊಳ್ಳಲು ದಕ್ಷಿಣದ ಗಂಗರಾಜ್ಯಕ್ಕೆ ಬರಬೇಕಾಯಿತು. ಇದಕ್ಕೆ ಆ ಕಾಲದಲ್ಲಿ ಶ್ರವಣಬೆಳಗೊಳ ಜೈನ ಸಂಸ್ಕೃತಿಯ ಕೇಂದ್ರವಾಗುತ್ತಿದ್ದುದ್ದು ಕಾರಣವಿರಬೇಕು. ಜೊತೆಗೆ ಚಾವುಂಡರಾಯನ ವ್ಯಕ್ತಿತ್ವ ಕೀರ್ತಿಗಳೂ ಸೇರಿರಬೇಕು. ಪುಣ್ಯ ವಿಶೇಷದಿಂದ ಇವನಿಗೆ ಗಂಗಮಂತ್ರಿ ಚಾಮುಂಡರಾಯನ ಆಶ್ರಯ ಸಿಕ್ಕಿತು. ಗಂಗರಾಜರ ಗುರುಗಳಾದ ಅಜಿತಸೇನಾಚಾರ್ಯರು ಇವನಿಗೆ ಗುರುಗಳಾಗಿ ದೊರೆತಂದು ಇವನಲ್ಲಿದ್ದ ಧಾರ್ಮಿಕ ಆಸಕ್ತಿ ಬೆಳೆಯಲು ಅನುಕೂಲವಾಯಿತು. ಈ ಸನ್ನಿವೇಶದಲ್ಲಿ ರನ್ನ ಕವಿಯಾಗಿಯೂ ವಿದ್ವಾಂಸನಾಗಿಯೂ ಹೊರಹೊಮ್ಮಲು ಸಾಧ್ಯವಾಯಿತು.

ಚಾವುಂಡರಾಯನ ನೆರವಿನಿಂದ ಸಕಲ ವಿದ್ಯಾಪಾರಂಗತನಾದ ರನ್ನ ಗಂಗರಾಜ್ಯದಿಂದ ಹಿಂದಿರುಗಿ ಚಾಳುಕ್ಯ ತೈಲಪನಲ್ಲಿ ಆಶ್ರಯ ಪಡೆದ. ತೈಲಪನ ಮಗನಾದ ಸತ್ಯಾಶ್ರಯ ಇರಿವಬೆಡಂಗ ಈತನಿಗೆ ಆಶ್ರಯ ನೀಡಿದ. ಹೀಗೆ ರನ್ನ ಗಂಗರಾಜ್ಯದಿಂದ ಹಿಂದಿರುಗಲು ಅತ್ತಿಮಬ್ಬೆಯ ಪ್ರಭಾವಿ ವ್ಯಕ್ತಿತ್ವ ಕಾರಣವಿರಬೇಕು. ಅತ್ತಿಮಬ್ಬೆ ಶ್ರವಣಬೆಳಗೊಳಕ್ಕೆ ಬಂದು ಗೊಮ್ಮಟದರ್ಶನ ಪಡೆದ ವಿಚಾರ ಅಜಿತಪುರಾಣದಲ್ಲಿ ಬಂದಿದೆ. ಹಾಗೆ ಬಂದಿದ್ದಾಗ ರನ್ನ ಅವಳ ವ್ಯಕ್ತಿತ್ವಕ್ಕೆ ಆಕರ್ಷಿತನಾಗಿ ತನ್ನ ರಾಜ್ಯಕ್ಕೆ ಮರಳಲು ಮನಸ್ಸುಮಾಡಿರಬೇಕು. ಕವಿ ಇದ್ದಕ್ಕಿದ್ದಂತೆ ಮೇಲೇರಿದವನಲ್ಲ; ಹಂತ ಹಂತವಾಗಿ ಮುಂದೆ ಬಂದವನು. ಇದನ್ನು ತಿಳಿಸುವ ಪದ್ಯವೊಂದು 'ಗದಾಯುದ್ಧ'ದಲ್ಲಿದೆ. ಆರಂಭಕ್ಕೆ ಸಾಮಂತರ ನೆರವು ದೊರೆತ್ತಿದ್ದು ಇವರಾರೆಂಬುದರ ಬಗ್ಗೆ ಚರ್ಚೆಯಿದೆ. ಆದರೆ ಕವಿಗೆ ನೆರವಾದ ಈ ಸಾಮಂತ ರಟ್ಟರಾಜ ಒಂದನೆಯ ಕಾರ್ತವೀರ್ಯನಿರಬೇಕೆಂಬ ಊಹೆಯಿದೆ. ಮುಂದೆ ಅಭ್ಯುದಯಕ್ಕೆ ಕಾರಣನಾದವನು ಮಂಡಲೇಶ್ವರನಾದ ಚಾವುಂಡರಾಯನೆಂಬುದು ಸ್ಪಷ್ಟ. ಗಂಗದಂಡನಾಯಕನಾದ ಚಾವುಂಡರಾಯನಿಂದ ತಾನು 'ರತ್ನವಾಗಿ ರೂಪುಗೊಂಡೆನೆಂದು ಈತನೇ ಹೇಳಿಕೊಂಡಿದ್ದಾನೆ. ಹೀಗೆ ಬೆಳೆದ ರನ್ನ ಚಕ್ರವರ್ತಿ ತೈಲಪನಲ್ಲಿ 'ಮಹಿಮೋನ್ನತಿ'ಯನ್ನೇ ಪಡೆದ. ಅವನಿಂದ 'ಕವಿಚಕ್ರವರ್ತಿ' ಎಂಬ ಬಿರುದನ್ನೂ ಗಳಿಸಿದ. 'ಗದಾಯುದ್ಧ'ವನ್ನು ದಂಡನಾಯಕ ಕೇಶಿ ತಿದ್ದಿದವನೆಂದು ಹೇಳಿಕೊಂಡಿರುವುದರಿಂದ, ಈ ಕೇಶಿಯೇ ರನ್ನನನ್ನು ಚಕ್ರವರ್ತಿಗೆ ಪರಿಚಯಿಸಿರಬೇಕೆಂದು ತೋರುವುದು.

ರನ್ನನ ಪೋಷಕರಲ್ಲಿ ಚಾವುಂಡರಾಯ, ತೈಲಪರಂತೆಯೇ ಅತ್ತಿಮಬ್ಬೆಯೂ ಮುಖ್ಯಳಾಗಿದ್ದಾಳೆ. ಚಕ್ರವರ್ತಿಗಳಲ್ಲಿ ತೈಲಪ ಶ್ರೇಷ್ಠನಾಗಿರುವಂತೆ ದಾನದಲ್ಲಿ ದಾನಚಿಂತಾಮಣಿ ಅತ್ತಿಮಬ್ಬೆ ಹಾಗೆ ಎಂಬುದು ಕವಿಯ ಹೇಳಿಕೆ. ರನ್ನನಿಂದ ಅಜಿತಪುರಾಣವನ್ನು ಹೇಳಿಸಿದವಳು ಅತ್ತಿಮಬ್ಬೆ. ಆದಿಪುರಾಣ, ಶಾಂತಿಪುರಾಣಗಳಿಗೆ ಸಮಾನವಾದ ಈ ಕೃತಿಯನ್ನು 'ಆಶ್ರಿತ ಚಿಂತಾಮಣಿಗತ್ತಿಮಬ್ಬೆಗರ್ತಿಯೆ ಪೇಳ್ದಂ' ಎಂದಿದ್ದಾನೆ ಕವಿ. ಇದರಿಂದ ಅತ್ತಿಮಬ್ಬೆ ಪರವಾಗಿರುವ ಇವನ ಗೌರವ ವ್ಯಕ್ತವಾಗುತ್ತದೆ. ಹೀಗಾಗಿ ರನ್ನ ಪ್ರತಿಭಾವಂತನಾಗಿದ್ದು ಅದನ್ನು ಗುರುತಿಸುವ ಜನರ ಸಹವಾಸ ದೊರಕಿದ್ದರಿಂದ ಸುಲಭವಾಗಿ ಮೇಲೇರಲು ಸಾಧ್ಯವಾಯಿತು. ಕವಿ ತಾನು ಸೌಮ್ಯ ಸಂವತ್ಸರದಲ್ಲಿ ಹುಟ್ಟಿದವನೆಂದು ಹೇಳಿಕೊಂಡಿದ್ದಾನೆ. ಇದು 949 ಆಗುತ್ತದೆ. ಆದ್ದರಿಂದ ರನ್ನ ಹುಟ್ಟಿದ್ದು 949ರಲ್ಲಿ ಎನ್ನುವುದು ಖಚಿತ. ರನ್ನನ ಕಾಲವನ್ನು ಸಾಮಾನ್ಯವಾಗಿ 993 ಎಂದು ನಿಗದಿಪಡಿಸುವುದು ವಾಡಿಕೆ. ಇದಕ್ಕೆ ಅಜಿತಪುರಾಣದ ಕಾಲ 993 ಎಂದು ಸ್ಪಷ್ಟವಾಗಿರುವುದೇ ಕಾರಣ. ರನ್ನ ಅಜಿತಪುರಾಣವನ್ನು ಅತ್ತಿಮಬ್ಬೆಯ ಆಶ್ರಯದಲ್ಲಿ ಬರೆದಿರುವನಾದರೂ ಒಂದು ರೀತಿಯಲ್ಲಿ ಬರೆದನೆಂದು ಹೇಳಬಹುದಾಗಿದೆ. ಆದ್ದರಿಂದ ರನ್ನನ ಕಾಲಗಣನೆಯಲ್ಲಿ ತೈಲಪನ ಆಳ್ವಿಕೆಯ ಕಾಲ ಸಹಜವಾಗಿಯೇ ಗಮನಕ್ಕೆ ಬರುತ್ತದೆ. ಸತ್ಯಾಶ್ರಯವನ್ನು ಸಮೀಕರಿಸಿ ಗದಾಯುದ್ಧವನ್ನು ಬರೆದಿದ್ದರಿಂದ ಈ ಕಾವ್ಯದ ಕಾಲ ಸತ್ಯಾಶ್ರಯನ ಕಾಲಕ್ಕಿಂತ ಬೇರೆಯಾಗುವುದು ಸಾಧ್ಯವಿಲ್ಲ. ಈ ಕಾರಣದಿಂದ ಗದಾಯುದ್ಧದ ಕಾಲವನ್ನು 1005 ಎಂದು ಗುರುತಿಸಲಾಗಿದೆ. ಕವಿ 1020ರಲ್ಲಿ ತೀರಿಕೊಂಡಿರಬೇಕೆಂದು ಅಭಿಪ್ರಾಯವಿದೆ.

S.G.V.C Vidya Prasarak Trust's

# M.G.V.C ARTS, COMMERCE AND SCIENCE COLLEGE, MUDDEBIHAL

NAAC A+ GRADE

## DEPARTMENT OF KANNAD

## YEAR - 2023-24

**Teachers Use ICT enabled tools for Effective Teaching Learning Process**

**Name of the Staff Member: DR. BASAVARAJ HADAPAD**

**Class: B.A.III[rd] Semester Date: 30.01.2024 Time: 9.30 to 10.30 am**




PRINCIPAL,
M.G.V.C. Arts, Commerce & Science College
MUDDEBIHAL-586212. Dist: Vijayapur

**Teachers Use ICT enabled tools for Effective Teaching Learning Process**

**Name of the Staff Member: DR. BASAVARAJ HADAPAD**

**Class: B.A.III[rd] Semester    Date: 30.01.2024    Time: 9.30 to 10.30 am**




## ಕನ್ನಡದಲ್ಲಿ ನವ್ಯ.

ನವೋದಯ ಕಾವ್ಯದಂತೆ ನವ್ಯಕಾವ್ಯವ ಇಂಗ್ಲಿಷ್ ಕಾವ್ಯದ ಪ್ರೇರಣೆಯಿಂದಲೇ ಹುಟ್ಟಿಕೊಂಡದ್ದು. ನವ್ಯಕಾವ್ಯ ಇಂಗ್ಲಿಷಿನ ಮಾಡರ್ನ್ ಪೊಯಿಟ್ರಿಗೆ ಸಂವಾದಿಯಾದ ಪದ. ನವೋದಯ ಕಾವ್ಯಕ್ಕೆ ಆಧುನಿಕ ಕಾವ್ಯ ಎಂಬ ಇನ್ನೊಂದು ಹೆಸರೂ ಬಳಕೆಯಲ್ಲಿ ಇದ್ದಿತಾದ್ದರಿಂದ ಇಂಗ್ಲಿಷಿನ ಮಾಡರ್ನ್ ಪೊಯಿಟ್ರಿಯಿಂದ ಪ್ರೇರಣೆಪಡೆದ ಕನ್ನಡ ಕಾವ್ಯವನ್ನು ಆಧುನಿಕ ಕಾವ್ಯ ಎಂದು ಕರೆಯುವಂತಿರಲಿಲ್ಲ. ಆದ್ದರಿಂದ ಅದನ್ನು ಕನ್ನಡದ ಸಂದರ್ಭದಲ್ಲಿ ನವ್ಯಕಾವ್ಯ ಎಂದು ಕರೆಯಬೇಕಾಗಿ ಬಂದಿತೆಂದು ತೋರುತ್ತದೆ.

ನವೋದಯ ಕಾವ್ಯಕ್ಕಿಂತ ಭಿನ್ನರೀತಿಯ ಕಾವ್ಯಪ್ರಕಾರವಿದು ಎಂದು ನಿರ್ದೇಶಿಸುವ ಅನುಕೂಲಕ್ಕಾಗಿ ಬಳಸಿದ ಪಾರಿಭಾಷಿಕ ಪದವೆಂದು ಮಾತ್ರ ಇದನ್ನು ತಿಳಿಯಬೇಕಾಗುತ್ತದೆ. ಶ್ರೇಷ್ಠಕಾವ್ಯ ಯಾವ ಕಾಲಕ್ಕೂ ನವ್ಯವಾಗಿಯೆ ಇರುತ್ತದೆ. ಇದು ನವ್ಯ ಎಂದಕೂಡಲೆ ಎಲ್ಲ ರೀತಿಯಿಂದಲೂ ನವ್ಯ-ನ ಭೂತೋ ನ ಭವಿಷ್ಯತಿ ಎಂದು ಅರ್ಥ ಹಚ್ಚಬೇಕಾಗಿಲ್ಲ ಎಂಬ ಗೋಪಾಲಕೃಷ್ಣ ಅಡಿಗರ ಮಾತನ್ನು ಇಲ್ಲಿ ನೆನೆಯಬಹುದು (ಹೊಸ ಕವಿತೆಯನ್ನು ಕುರಿತು, 1953). ನವ್ಯಕಾವ್ಯ ಎಂಬ ಕಾವ್ಯ ಪ್ರಕಾರಕ್ಕೆ ಆ ಹೆಸರನ್ನು ಕೊಟ್ಟವರು ವಿ.ಕೃ. ಗೋಕಾಕರು.

ಕನ್ನಡದ ನವೋದಯ ಕಾವ್ಯ 19ನೆಯ ಶತಮಾನದ ಇಂಗ್ಲೆಂಡಿನ ರೊಮ್ಯಾಂಟಿಕ್ ಕಾವ್ಯ ಸಂಪ್ರದಾಯದಿಂದ ಪ್ರೇರಣೆ ಪಡೆದದ್ದಾಗಿತ್ತು. ನಮ್ಮಲ್ಲಿ 20ನೆಯ ಶತಮಾನದ ಪೂರ್ವಾರ್ಧದಲ್ಲಿ ಅದರ ಪ್ರಭಾವ ಗಾಢವಾಗಿತ್ತು. ಆ ಹೊತ್ತಿಗಾಗಲೇ ಇಂಗ್ಲೆಂಡಿನಲ್ಲಿ ತೀವ್ರತರವಾದ ರಾಜಕೀಯ ಮತ್ತು ಸಾಮಾಜಿಕ ಪರಿಸ್ಥಿತಿಗಳ ಬದಲಾವಣೆಗಳಿಂದಾಗಿ ಕಾವ್ಯ ಕ್ಷೇತ್ರದಲ್ಲಿಯೂ ಅಪೂರ್ವವಾದ ಬದಲಾವಣೆಗಳು ಆಗತೊಡಗಿದ್ದುವು. ರೊಮ್ಯಾಂಟಿಕ್ ಯುಗ ಮುಗಿದು ವಿಕ್ಟೋರಿಯನ್ ಯುಗವೂ ಕಳೆದು ಟಿ.ಇ.ಹ್ಯೂಮ್ ಮುಂತಾದವರು ಕಾವ್ಯ ಅಭಿವ್ಯಕ್ತಿ ತಂತ್ರ ಮತ್ತು ಧೋರಣೆಗಳಿಗೆ ಸಂಬಂಧಿಸಿದಂತೆ ಭಿನ್ನ ನಿಲವನ್ನು ಪ್ರತಿಪಾದಿಸಿ ಪ್ರತಿಮಾನಿಷ್ಠ ಆಂದೋಲನಕ್ಕೆ ಕಾರಣರಾಗಿದ್ದರು. ಎಜ್ರಾ ಪೌಂಡ್ ಕವಿಯೂ ಅದನ್ನು ಬೆಂಬಲಿಸಿದ್ದ. ಮುಂದೆ ಟಿ.ಎಸ್. ಎಲಿಯಟ್ ಪ್ರತಿಮಾನಿಷ್ಠ ಕಾವ್ಯ ರೀತಿಯೊಂದಿಗೆ ಅನುಭಾವ ಪಂಥ ಮತ್ತು ಫ್ರೆಂಚ್ ಸಂಕೇತನಿಷ್ಠ ಕಾವ್ಯಗಳ ಉತ್ತಮಾಂಶಗಳನ್ನೂ ಸಮನ್ವಯಗೊಳಿಸಿ ಹೆಚ್ಚು ಸಂಕೀರ್ಣವೂ ಸಮಗ್ರವೂ ಆದ ಕಾವ್ಯ ರೀತಿಯನ್ನೂ ವಿಮರ್ಶಾ ವಿಧಾನವನ್ನೂ ಬೆಳೆಸಿದ. ಈ ಮಧ್ಯೆ ಯೇಟ್ಸ್ ಕವಿಯೂ ತನ್ನ ಕೊನೆಗಾಲದ ಕವನಗಳಲ್ಲಿ ತನ್ನ ಸ್ವಂತಿಕೆಯನ್ನು ಉಳಿಸಿಕೊಂಡಂಥ ನವ್ಯಕಾವ್ಯವನ್ನು ಬರೆಯುತ್ತಿದ್ದ. ಎಲಿಯಟ್ಟ ವೇಸ್ಟ್‌ಲ್ಯಾಂಡ್ ಕಾವ್ಯ ಪ್ರಕಟವಾಗುವುದಕ್ಕಿಂತ ನಾಲ್ಕು ವರ್ಷ ಮೊದಲು (1918) ಹಾಪ್ಕಿನ್ಸ್‌ನ ಕವನಗಳ ಸಂಗ್ರಹವನ್ನು ಆತನ ಮರಣೋತ್ತರಕಾಲದಲ್ಲಿ ರಾಬರ್ಟ್ ಬ್ರಿಡ್ಜಸ್ ಎಂಬುವನು ಪ್ರಕಟಿಸಿದ್ದ.